RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು
ವಿಶೇಷ ರಾಜ್ಯ ಪತ್ರಿಕೆ

| ಭಾಗ - IV-A<br>Part - IV-A | ಬೆಂಗಳೂರು, ಶನಿವಾರ, ಜನವರಿ ೪, ೨೦೧೪ (ಪುಷ್ಯ ೧೪, ಶಕ ವರ್ಷ ೧೯೩೫)<br>Bangalore, Saturday, January 4, 2014 (Pushya 14, Shaka Varsha 1935) | ಸಂ. ೧೪<br>No. 14 |
|---|---|---|

## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ

### ಅಧಿಸೂಚನೆ

**ಸಂಖ್ಯೆ: ಸಂವ್ಯಶಾಇ 05 ಶಾಸನ 2013, ಬೆಂಗಳೂರು, ದಿನಾಂಕ: 04.01.2014**

ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) (ತಿದ್ದುಪಡಿ) ವಿಧೇಯಕ, 2013ಕ್ಕೆ 2014ರ ಜನವರಿ ತಿಂಗಳ ಮೂರನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2013ರ ಕರ್ನಾಟಕ ಅಧಿನಿಯಮ ಸಂಖ್ಯೆ: 03 ಎಂಬುದಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2014ರ ಕರ್ನಾಟಕ ಅಧಿನಿಯಮ ಸಂಖ್ಯೆ 03**

(2014ರ ಜನವರಿ ತಿಂಗಳ ನಾಲ್ಕನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) (ತಿದ್ದುಪಡಿ) ಅಧಿನಿಯಮ, 2013**

(2014ರ ಜನವರಿ ತಿಂಗಳ ಮೂರನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ಅಧಿನಿಯಮ, 2002ನ್ನು ತಿದ್ದುಪಡಿ ಮಾಡುವುದಕ್ಕಾಗಿ ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ಅಧಿನಿಯಮ, 2002 (2003ರ ಕರ್ನಾಟಕ ಅಧಿನಿಯಮ 45)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ನಾಲ್ಕನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು, ಎಂದರೆ:-

1. **ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.**- (1) ಈ ಅಧಿನಿಯಮವನ್ನು ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) (ತಿದ್ದುಪಡಿ) ಅಧಿನಿಯಮ, 2013 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

2. **2ನೇ ಪ್ರಕರಣದ ತಿದ್ದುಪಡಿ.**- ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ಅಧಿನಿಯಮ, 2002ರ (2003ರ ಕರ್ನಾಟಕ ಅಧಿನಿಯಮ 45) (ಇಲ್ಲಿ ಇನ್ನು ಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 2ನೇ ಪ್ರಕರಣದಲ್ಲಿ (x) ನೇ ಖಂಡದ ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"(xi) 'ರಾಜ್ಯ ಮಟ್ಟದ ಪ್ರಾಧಿಕೃತ ಸಮಿತಿ' ಎಂದರೆ, 11ಎ ಪ್ರಕರಣದ ಅಡಿಯಲ್ಲಿ ರಚಿಸಲಾದ ರಾಜ್ಯ ಮಟ್ಟದ ಪ್ರಾಧಿಕೃತ ಸಮಿತಿ;"

**3. 3ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 3ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ "ಐವತ್ತು ಕೋಟಿ ರೂಪಾಯಿಗಳು" ಎಂಬ ಪದಗಳಿಗೆ "ಒಂದು ನೂರು ಕೋಟಿ ರೂಪಾಯಿಗಳು" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

**4. 6ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 6ನೇ ಪ್ರಕರಣದ (2)ನೇ ಉಪಪ್ರಕರಣದಲ್ಲಿ "ಮೂರು ಕೋಟಿ ರೂಪಾಯಿಗಳಿಗಿಂತ ಹೆಚ್ಚು ಮತ್ತು ಐವತ್ತುಕೋಟಿ ರೂಪಾಯಿಗಳಿಗಿಂತ ಕಡಿಮೆ" ಎಂಬ ಪದಗಳಿಗೆ "ಹದಿನೈದು ಕೋಟಿ ರೂಪಾಯಿಗಳಿಗಿಂತ ಹೆಚ್ಚು ಮತ್ತು ಒಂದು ನೂರು ಕೋಟಿ ರೂಪಾಯಿಗಳಿಗಿಂತ ಕಡಿಮೆ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

**5. 9ನೇ ಪ್ರಕರಣದ ತಿದ್ದುಪಡಿ.-** ಮೂಲ ಅಧಿನಿಯಮದ 9ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ, "ಮೂರು ಕೋಟಿ ರೂಪಾಯಿಗಳ" ಎಂಬ ಪದಗಳಿಗೆ "ಹದಿನೈದು ಕೋಟಿ ರೂಪಾಯಿಗಳ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

**6. 11ಎ ಹೊಸ ಪ್ರಕರಣದ ಸೇರ್ಪಡೆ.-** ಮೂಲ ಅಧಿನಿಯಮದ 11ನೇ ಪ್ರಕರಣದ ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

**"11ಎ. ರಾಜ್ಯ ಮಟ್ಟದ ಪ್ರಾಧಿಕೃತ ಸಮಿತಿ.-** (1) ಸರ್ಕಾರವು ಈ ಮುಂದಿನವರನ್ನು ಒಳಗೊಂಡ ರಾಜ್ಯ ಮಟ್ಟದ ಪ್ರಾಧಿಕೃತ ಸಮಿತಿಯನ್ನು ರಚಿಸಬಹುದು, ಎಂದರೆ:-

| | | |
|---|---|---|
| ಎ | ಕರ್ನಾಟಕ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು | ಅಧ್ಯಕ್ಷರು |
| ಬಿ | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆಗಳ ಇಲಾಖೆ | ಸದಸ್ಯರು |
| ಸಿ | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ | ಸದಸ್ಯರು |
| ಡಿ | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜಲಸಂಪನ್ಮೂಲ ಇಲಾಖೆ | ಸದಸ್ಯರು |
| ಇ | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಇಂಧನ ಇಲಾಖೆ | ಸದಸ್ಯರು |
| ಎಫ್ | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಾಹಿತಿ ಮತ್ತು ತಂತ್ರಜ್ಞಾನ ಇಲಾಖೆ | ಸದಸ್ಯರು |
| ಜಿ | ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ | ಸದಸ್ಯರು |
| ಎಚ್ | ಸರ್ಕಾರದ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿ ಪರಿಸ್ಥಿತಿ ಶಾಸ್ತ್ರ ಇಲಾಖೆ | ಸದಸ್ಯರು |
| ಐ | ಸರ್ಕಾರದ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆಗಳ ಇಲಾಖೆ (ಸಣ್ಣ ಪ್ರಮಾಣದ ಕೈಗಾರಿಕೆಗಳು, ಜವಳಿ ಮತ್ತು ಗಣಿ) | ಸದಸ್ಯರು |
| ಜೆ | ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಕೃಷಿ ಇಲಾಖೆ | ಸದಸ್ಯರು |
| ಕೆ | ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ | ಸದಸ್ಯರು |
| ಎಲ್ | ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ | ಸದಸ್ಯರು |
| ಎಮ್ | ಅಧ್ಯಕ್ಷರು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಲಿ | ಸದಸ್ಯರು |

| | | |
|---|---|---|
| ಎನ್ | ಪೊಲೀಸು ಮಹಾ ನಿರ್ದೇಶಕರು ಮತ್ತು ಮಹಾನಿರೀಕ್ಷಕರು, ಕರ್ನಾಟಕ ರಾಜ್ಯ ಅಗ್ನಿ ಶಾಮಕ ಮತ್ತು ತುರ್ತು ಸೇವೆಗಳು | ಸದಸ್ಯರು |
| ಒ | ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮತ್ತು ಕಾರ್ಯನಿರ್ವಹಣಾ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ, ಬೆಂಗಳೂರು | ಸದಸ್ಯರು |
| ಪಿ | ಕೈಗಾರಿಕಾ ಅಭಿವೃದ್ಧಿ ಆಯುಕ್ತರು ಮತ್ತು ಕೈಗಾರಿಕೆ ಮತ್ತು ವಾಣಿಜ್ಯ ನಿರ್ದೇಶಕರು | ಸದಸ್ಯ ಕಾರ್ಯದರ್ಶಿ |

ಟಿಪ್ಪಣಿ:- ಈ ಪ್ರಕರಣದ ಉದ್ದೇಶಕ್ಕಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಎಂದರೆ, "ಕೈಗಾರಿಕೆಗಳು (ಸೌಲಭ್ಯ)" ವಿಷಯದ ಪ್ರಭಾರವನ್ನು ಹೊಂದಿರುವ ಸರ್ಕಾರದ ಕಾರ್ಯದರ್ಶಿಗಳು ಅಥವಾ ಪ್ರಧಾನ ಕಾರ್ಯದರ್ಶಿಗಳು ಅಥವಾ ಅಪರ ಮುಖ್ಯ ಕಾರ್ಯದರ್ಶಿಗಳು.

(2) ಸಮಿತಿಯು, ಅವಶ್ಯವಿದ್ದಲ್ಲಿ ಅಂಥ ಪರಿಣತಿ ಅಥವಾ ಜ್ಞಾನವನ್ನುಳ್ಳ ವ್ಯಕ್ತಿಯನ್ನು ಸಹ-ಸದಸ್ಯನನ್ನಾಗಿ ಸೇರಿಸಿಕೊಳ್ಳಬಹುದು.

(3) ರಾಜ್ಯ ಮಟ್ಟದ ಪ್ರಾಧಿಕೃತ ಸಮಿತಿಯ ಪ್ರಕಾರ್ಯಗಳು ಈ ಮುಂದಿನಂತೆ ಇರತಕ್ಕದ್ದು,-

(i) ರಾಜ್ಯ ಮಟ್ಟದ ಏಕಗವಾಕ್ಷಿ-ಒಪ್ಪಿಗೆ ನೀಡಿಕೆ ಸಮಿತಿ ಮತ್ತು ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿಯು ಒಪ್ಪಿಗೆ ನೀಡಿದ ಯೋಜನೆಗಳ ಅನುಷ್ಠಾನದ ಪ್ರಗತಿಯನ್ನು ಮೇಲ್ವಿಚಾರಣೆ ಮಾಡುವುದು;

(ii) ನಿಯಮಿಸಬಹುದಾದ ಅಂಥ ಇತರ ಪ್ರಕಾರ್ಯಗಳನ್ನು ನಿರ್ವಹಿಸುವುದು."

7. **14ನೇ ಪ್ರಕರಣದ ಪ್ರತಿಯೋಜನೆ.-** ಮೂಲ ಅಧಿನಿಯಮದ 14ನೇ ಪ್ರಕರಣಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

**"14. ಸಂಯೋಜಿತ ಅರ್ಜಿ ನಮೂನೆಗಳು (Combined Application Forms) (CAF).-** ರಾಜ್ಯ ಸರ್ಕಾರವು, ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿ ಅಥವಾ ರಾಜ್ಯ ಉನ್ನತ ಮಟ್ಟದ ಏಕ ಗವಾಕ್ಷಿ ಒಪ್ಪಿಗೆ ನೀಡಿಕೆ ಸಮಿತಿ ಅಥವಾ ಜಿಲ್ಲಾ ಮಟ್ಟದ ಏಕಗವಾಕ್ಷಿ ಒಪ್ಪಿಗೆ ನೀಡಿಕೆ ಸಮಿತಿಯಿಂದ ಒಪ್ಪಿಗೆಯನ್ನು ಪಡೆಯುವುದಕ್ಕಾಗಿ ಉದ್ಯಮಿಗಳ ಬಳಕೆಗಾಗಿ ಸಂಯೋಜಿತ ಅರ್ಜಿ ನಮೂನೆಯೊಂದನ್ನು ನಿಯಮಿಸಬಹುದು. ಅಗತ್ಯಪಡಿಸಿದ ಒಪ್ಪಿಗೆಗಳನ್ನು ಪಡೆಯುವುದಕ್ಕಾಗಿ ಕಾರ್ಖಾನೆಗಳ ಅಧಿನಿಯಮ, 1948ರ 41ಎ ಪ್ರಕರಣದಲ್ಲಿ ಮತ್ತು ಅದರಡಿಯಲ್ಲಿ ರಚಿಸಲಾದ ನಿಯಮಗಳ ಅಡಿಯಲ್ಲಿ ಕಾರ್ಖಾನೆಗೆ ಲೈಸೆನ್ಸು ನೀಡುವುದಕ್ಕಾಗಿನ ಅರ್ಜಿಯನ್ನು ಹೊರತುಪಡಿಸಿ ಅನ್ವಯವಾಗುವ ಕೇಂದ್ರ ಹಾಗೂ ರಾಜ್ಯ ಅಧಿನಿಯಮಗಳ ಅಡಿಯಲ್ಲಿ ನಿಯಮಿಸಲಾದ ಪ್ರಸ್ತುತ ಇರುವ ನಮೂನೆಗಳ ಬದಲಾಗಿ ಸಹ ಈ ಸಂಯೋಜಿತ ಅರ್ಜಿ ನಮೂನೆಯನ್ನು ಬಳಸತಕ್ಕದ್ದು. ಸಂಬಂಧಪಟ್ಟ ಎಲ್ಲಾ ಇಲಾಖೆಗಳು ಅಥವಾ ಪ್ರಾಧಿಕಾರಗಳು ಅಂಥ ಸಂಯೋಜಿತ ಅರ್ಜಿ ನಮೂನೆಯನ್ನು ಪರಿಶೀಲನೆಗಾಗಿ ಮತ್ತು ಅಗತ್ಯಪಡಿಸಿದ ಒಪ್ಪಿಗೆಗಳನ್ನು ನೀಡುವುದಕ್ಕಾಗಿ ಅಂಗೀಕರಿಸತಕ್ಕದ್ದು."

8. **16ನೇ ಪ್ರಕರಣವನ್ನು ಬಿಟ್ಟುಬಿಡುವುದು.-** ಮೂಲ ಅಧಿನಿಯಮದ 16ನೇ ಪ್ರಕರಣವನ್ನು ಬಿಟ್ಟುಬಿಡತಕ್ಕದ್ದು.

9. **18ಎ ಹೊಸ ಪ್ರಕರಣದ ಸೇರ್ಪಡೆ.-** ಮೂಲ ಅಧಿನಿಯಮದ 18ನೇ ಪ್ರಕರಣದ ತರುವಾಯ, ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ.-

**"18ಎ. ಪುನರವಲೋಕನ.-** (1) ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿಯ ತೀರ್ಮಾನದಿಂದ ಬಾಧಿತನಾದ ಯಾವೊಬ್ಬ ಅರ್ಜಿದಾರನು,-

(ಎ) ಅಂಥ ಸಮಿತಿಯು, ಯಾವ ಹೊಸ ಸಂಗತಿಗಳು ಅಥವಾ ಕಾರಣಗಳ ಮೇಲೆ ಅದರ ತೀರ್ಮಾನವನ್ನು ಪುನರ್ ಪರಿಶೀಲಿಸಬೇಕಾಗಿದೆಯೋ ಅಂಥ ಹೊಸ ಸಂಗತಿಗಳನ್ನು ಅಥವಾ ಕಾರಣಗಳನ್ನು ಅರ್ಜಿದಾರನು ಹೊಂದಿದ್ದರೆ,

(ಬಿ) ತೀರ್ಮಾನದಲ್ಲಿ ಹೊರನೋಟಕ್ಕೆ ಕಾಣಬರುವ ಸ್ಪಷ್ಟವಾದ ದೋಷಗಳನ್ನು ತೋರಿಸಿಕೊಟ್ಟರೆ,-

-ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿಗೆ, ಅದು ಈ ಹಿಂದೆ ನೀಡಿದ ತೀರ್ಮಾನವನ್ನು ಪುನರವಲೋಕಿಸುವಂತೆ ಅಪೀಲು ಮಾಡಿಕೊಳ್ಳಬಹುದು.

(2) ರಾಜ್ಯ ಉನ್ನತ ಮಟ್ಟದ ಒಪ್ಪಿಗೆ ನೀಡಿಕೆ ಸಮಿತಿಯು ಅಂಥ ಅರ್ಜಿಯನ್ನು ಪರಿಗಣಿಸಬಹುದು ಮತ್ತು ಸೂಕ್ತ ತೀರ್ಮಾನವನ್ನು ಕೈಗೊಳ್ಳಬಹುದು ಮತ್ತು ಅದು ಅಂತಿಮವಾಗಿರತಕ್ಕದ್ದು."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಕೆ.ಬಿ. ಚೆಂಗಪ್ಪ
ಸರ್ಕಾರದ ಕಾರ್ಯದರ್ಶಿ(ಪ್ರ)
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) (400 ಪ್ರತಿಗಳು)